ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 215 ಟಿಇಸಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ:18.07.2023.

## ಅಧಿಸೂಚನೆ

ಎಐಸಿಟಿಇ, ನವದೆಹಲಿ ಮತ್ತು ಕೌನ್ಸಿಲ್ ಆಫ್ ಆರ್ಕಿಟೆಕ್ಚರ್, ನವದೆಹಲಿ ರವರುಗಳು ವೃತ್ತಿಪರ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ನೀಡಿರುವ ಅನುಮೋದಿತ ಇನ್‌ಟೇಕ್‌ನಂತೆ, ರಾಜ್ಯದಲ್ಲಿನ ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿನ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ 2023-24ನೇ ಶೈಕ್ಷಣಿಕ ಸಾಲಿನ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಕೈಗೊಳ್ಳಬೇಕಿರುತ್ತದೆ. ಅದರನ್ವಯ ಕರಡು ಸೀಟು ಮ್ಯಾಟ್ರಿಕ್ಸ್ ಅನ್ನು ಸಿದ್ಧಪಡಿಸಿ ಇದರೊಂದಿಗೆ ಲಗತ್ತಿಸಿದೆ. ಈ ಬಗ್ಗೆ ಯಾವುದಾದರೂ ಲೋಪದೋಷ/ಆಕ್ಷೇಪಣೆ/ ಸಲಹೆಗಳಿದ್ದಲ್ಲಿ, ಸಾರ್ವಜನಿಕರು/ಶಿಕ್ಷಣ ಸಂಸ್ಥೆಗಳು ತಮ್ಮ ಆಕ್ಷೇಪಣೆ/ಸಲಹೆಗಳನ್ನು ನೇರವಾಗಿ ಸರ್ಕಾರದ ಜಂಟಿ ಕಾರ್ಯದರ್ಶಿ (ಯೋಜನೆ ಮತ್ತು ತಾಂತ್ರಿಕ ಶಿಕ್ಷಣ), ಉನ್ನತ ಶಿಕ್ಷಣ ಇಲಾಖೆ, 3ನೇ ಗೇಟ್, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇಲ್ಲಿಗೆ ಲಿಖಿತವಾಗಿ ಅಥವಾ ಈ ಕೆಳಕಂಡ ಇ-ಮೇಲ್‌ಗಳಿಗೆ 7 ದಿನಗಳೊಳಗಾಗಿ ಸಲ್ಲಿಸುವಂತೆ ಕೋರಲಾಗಿದೆ ಹಾಗೂ ಅವಧಿ ಮುಗಿದ ನಂತರ ಸ್ವೀಕೃತವಾಗುವ ಯಾವುದೇ ಆಕ್ಷೇಪಣೆ/ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಸಹ ತಿಳಿಸಲಾಗಿದೆ.

1) dstechandplang@gmail.com
2) undersecretaryte@gmail.com
3) prshigh-edu@karnataka.gov.in

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

18.07.2023
(ನರಸಿಂಹಪ್ಪ)
ಸರ್ಕಾರದ ಜಂಟಿ ಕಾರ್ಯದರ್ಶಿ,
(ತಾಂತ್ರಿಕ & ಯೋಜನೆ ಶಿಕ್ಷಣ)
ಉನ್ನತ ಶಿಕ್ಷಣ ಇಲಾಖೆ

**ಇವರಿಗೆ:-** ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು ಇ-ಗೆಜೆಟ್ ನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ

**ಪ್ರತಿ:-**

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು – ತಮ್ಮ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸುವ ಸಲುವಾಗಿ.
2) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು – ತಮ್ಮ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸುವ ಸಲುವಾಗಿ.
3) ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಸಂಗಮ, ಬೆಳಗಾವಿ, ತಮ್ಮ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸುವ ಸಲುವಾಗಿ.
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned by CamScanner